ಕರ್ನಾಟಕ ಸರ್ಕಾರ (ಸಿ.ಆರ್.ಪಿ. 67)

| |
|---|
| ಹೇಳಿಕೆ ಹಾಳೆ<br>(ಆರ್.ಪಿ. ಸಂಖ್ಯೆ 57)<br>ನಮೂನೆ ಸಂಖ್ಯೆ 4<br>(ಸಿವಿಲ್) |

ದಿವಾಣಿ ನ್ಯಾಯಾಧೀಶರು ಹಾಗೂ ಪ್ರ.ದ.ನ್ಯಾ.ದಂ. ಹಳಿಯಾಳ
ಇವರ ನ್ಯಾಯಾಲಯದಲ್ಲಿ.

ಸಿ.ಸಿ. ನಂ.: 305/2020

.....................................................................

CW 07
PW 04

| | | |
|---|---|---|
| ಹೆಸರು | : | ಸಂತೋಷ ಜುಂಜುವಾಡಕರ |
| ತಂದೆಯ ಹೆಸರು | : | ಗುಂಡು |
| ವಯಸ್ಸು | : | 30 ವರ್ಷ |
| ಉದ್ಯೋಗ | : | ರೈತಾಪಿ ಕೆಲಸ |
| ವಾಸಸ್ಥಳ | : | ಗುಂಡೋಳ್ಳಿ, ತಾಃ ಹಳಿಯಾಳ. |

ದಿನಾಂಕ 06-01-2026 ರಂದು ಸತ್ಯಪ್ರತಿಜ್ಞೆ ಮೇಲೆ ಪ್ರಮಾಣವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ** : ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ :

ಚಾಸಾ 1 ರಿಂದ 6 ರವರ ಪರಿಚಯ ಇಲ್ಲ. ಚಾಸಾ 8 ರಿಂದ 10 ರವರು ಪರಿಚಯ ಇದ್ದಾರೆ. ಉಳಿದವರು ಪರಿಚಯ ಇಲ್ಲ.

ಸುಮಾರು 5-6 ವರ್ಷಗಳ ಹಿಂದೆ ತಟ್ಟಿಗೇರಿ ರವರಿಗೆ ಅಪಘಾತ ಆಗಿದೆ ಎಂದು ನಾನು ಮತ್ತು ಚಾಸಾ 8 ರವರು ಹಳಿಯಾಳ ಸರ್ಕಾರಿ ಆಸ್ಪತ್ರೆಗೆ ಬಂದೆವು. ಅಪಘಾತವಾದವರನ್ನು ನೋಡಿದಾಗ ಅವರು ಮರಣ ಹೊಂದಿದರು. ಹೇಗೆ ಅಪಘಾತ ಆಯಿತು ಎಂದು ನಾನು ವಿಚಾರಣೆ ಮಾಡಿಲ್ಲ, ಅಪಘಾತದಲ್ಲಿ ಗಾಯಗೊಂಡವರು ಯಾರು ಎಂದು ನನಗೆ ಗೊತ್ತಿಲ್ಲ. ಸಾಕ್ಷಿಗೆ ನಿಪಿ 1 ಅನ್ನು ತೋರಿಸಲಾಗಿ ಸದರಿ ಅಪಘಾತವನ್ನು ನಾನು ನೋಡಿಲ್ಲ ಎನ್ನುತ್ತಾರೆ. ಆರೋಪಿಯನ್ನು ಈ ಹಿಂದೆ ನೋಡಿಲ್ಲ.

(ಈ ಹಂತದಲ್ಲಿ ಸಸಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಅಂತ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೇಳಿದ್ದರಿಂದ ಸಾಕ್ಷ್ಯ ಹಾಗೂ ಪ್ರಕರಣದ ಇತರ ಅಂಶಗಳನ್ನು ಗಮನಿಸಿ ಪಾಟೀ ಸವಾಲಿಗೆ ಅನುಮತಿ ನೀಡಲಾಯಿತು ).

**ಪಾಟೀ ಸವಾಲು : ಮಾನ್ಯ ಸಹಾಯಕ ಸರಕಾರಿ ಅಭಿಯೋಜಕರಿಂದ.**

ದಿನಾಂಕ 24-01-2020 ರಂದು ಪೊಲೀಸರಿಗೆ ಹೇಳಿಕೆ ನೀಡಿ ಅದರಲ್ಲಿ " ದಿನಾಂಕ 24-01-2020 ರಂದು ಬೆಳಗ್ಗೆ ------------- ದೂರು ನೀಡಿದ್ದು ಇರುತ್ತದೆ" ಎಂದು ನುಡಿದಿರುತ್ತೀರಿ ಎಂದರೆ ಸರಿಯಲ್ಲ. ಸಾಕ್ಷಿ ಅಲ್ಲಗಳೆದ ಹೇಳಿಕೆಯನ್ನು ನಿಪಿ 10 ಎಂದು ಗುರುತಿಸಲಾಯಿತು. ಅಪಘಾತದ ಬಗ್ಗೆ ಸಂಪೂರ್ಣ ಮಾಹಿತಿ ಇದ್ದರೂ ಮತ್ತು ಅಪಘಾತವನ್ನು ಕಣ್ಣಾರೆ ನೋಡಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ** ಆರೋಪಿತರ ಪರ ವಕೀಲರು ಪಾಟೀ ಸವಾಲು ಇರುವುದಿಲ್ಲ ಎಂದು ತಿಳಿಸಿರುತ್ತಾರೆ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದ ಮೇಲೆ ಗಣಕೀಕರಿಸಿದೆ)

ಓ.ಹೇ.ಕೇ. ಸರಿ ಅದೆ.

ದಿವಾಣಿ ನ್ಯಾಯಾಧೀಶರು ಹಾಗೂ
ಪ್ರ.ದ.ನ್ಯಾ.ದಂ., ಹಳಿಯಾಳ.